**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 3760/2025**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.01**

**ದಿನಾಂಕಃ 27.11.2025** **ಸಿಡಬ್ಲ್ಯೂ.01**

| | |
|---|---|
| ಹೆಸರು | ನಾಗರಾಜಪ್ಪ |
| ತಂದೆ ಹೆಸರು | ಮಹದೇವಪ್ಪ |
| ವಯಸ್ಸು | 63 ವರ್ಷ |
| ಉದ್ಯೋಗ | ವ್ಯವಸಾಯ |
| ವಾಸ ಸ್ಥಳ | ಹಲಸಬಾಳು |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ. 2 ಮತ್ತು 3 ರವರ ಪರಿಚಯವಿದೆ. ಚಾಸಾ.4 ರಿಂದ 12 ರವರ ಪರಿಚಯವಿಲ್ಲ. ಮೃತ ಯಶೋಧಮ್ಮ ನನ್ನ ಹೆಂಡತಿ. ಆರೋಪಿ ನನ್ನ ಅಳಿಯ. ದಿಃ 02.04.2024 ರಂದು ಆರೋಪಿ ನನ್ನ ಅಳಿಯ ನನ್ನ ಹೆಂಡತಿಯನ್ನು ಹಲಸಬಾಳನಿಂದ ರಾಜನಹಳ್ಳಿಗೆ ಮದ್ಯಾಹ್ನ 12.00 ಗಂಟೆಗೆ ಒಂದು ಮದುವೆಗೆ ತನ್ನ ಬೈಕ್ ಮೇಲೆ ಕರೆದುಕೊಂಡು ಹೋಗುತ್ತಿರುವಾಗ ಹೈವೇ ಹತ್ತಿರ ಅಪಘಾತ ಸಂಬವಿಸಿ ನನ್ನ ಹೆಂಡತಿ ಸ್ಥಳದಲ್ಲಿ ಮೃತ ಪಟ್ಟಿರುತ್ತಾರೆ. ಸುದ್ದಿ ತಿಳಿದು ನಾನು ದೂರು ನೀಡಿರುತ್ತೇನೆ. ಸಾಕ್ಷಿಯು ಗುರುತಿಸಿದ ದೂರನ್ನು ನಿಪಿ.1 ಎಂದು ಸಾಕ್ಷಿಯ ಸಹಿಯನ್ನು ನಿಪಿ.1(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು ಅದು ಸ್ಥಳ ಪಂಚನಾಮೆಯಾಗಿದ್ದು ಅದನ್ನು ನಿಪಿ.2 ಎಂದು ಸಾಕ್ಷಿಯ ಸಹಿಯನ್ನು ನಿಪಿ.2 (ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು ಅದು ಕಚ್ಚಾನಕಾಶೆಯಾಗಿದ್ದು ಅದನ್ನು ನಿಪಿ.3 ಎಂದು ಸಾಕ್ಷಿಯ ಸಹಿಯನ್ನು ನಿಪಿ.3 (ಎ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು ಅಪಘಾತವಾದ ವಿಚಾರಕ್ಕೆ ಮಾಡಿರುತ್ತೇನೆ. ಸಾಕ್ಷಿಗೆ 2 ಛಾಯ ಚಿತ್ರ ತೋರಿಸಲಾಗಿ ಅದರಲ್ಲಿ ತಾವು ಇರುವುದಾಗಿ ಒಪ್ಪಿದ್ದು ಸದರಿ ಛಾಯ ಚಿತ್ರಗಳನ್ನು ನಿಪಿ.4 ಮತ್ತು 5 ಎಂದು ಗುರುತಿಸಲಾಯಿತು. ನಿಪಿ.2 ಮತ್ತು 3 ರಲ್ಲಿರುವ ಸಂಗತಿಗಳ ಬಗ್ಗೆ ನನಗೆ ಮಾಹಿತಿ ಇಲ್ಲ. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು ಅದು ವಾಹನ ಪರಿಶೀಲನಾ ಪಂಚನಾಮೆಯಾಗಿದ್ದು ಅದನ್ನು ನಿಪಿ.6 ಎಂದು ಸಾಕ್ಷಿಯ ಸಹಿಯನ್ನು ನಿಪಿ.6 (ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಠಾಣೆಯಲ್ಲಿ ವಾಹನ ಪರಿಶೀಲನೆ ಸಂದರ್ಭದಲ್ಲಿ ಮಾಡಿರುತ್ತೇನೆ. ಸಾಕ್ಷಿಗೆ 2 ಛಾಯ ಚಿತ್ರ ತೋರಿಸಲಾಗಿ ಅದರಲ್ಲಿ ತಾವು ಇರುವುದಾಗಿ ಒಪ್ಪಿದ್ದು ಸದರಿ ಛಾಯ ಚಿತ್ರಗಳನ್ನು ನಿಪಿ.7 ಮತ್ತು 8 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ 02.05.2025 ರಂದು ನನ್ನ ಮಗನ ಮದುವೆ ರಾಜನಹಳ್ಳಿಯಲ್ಲಿ ಇದ್ದು ಮದ್ಯಾಹ್ನ 2.35 ಗಂಟೆಗೆ ಆರೋಪಿ ನನಗೆ ಕರೆ ಮಾಡಿ ಹಲಸಬಾಳುನಿಂದ ರಾಜನಹಳ್ಳಿಗೆ ಬರುವ ರಸ್ತೆಯಲ್ಲಿ ಕೆಎ/17 ಇ ಎನ್ 9807 ಬಜಾಜ್ ಪ್ಲಾಟಿನಾ ಬೈಕನಲ್ಲಿ ಮೃತ ಯಶೋದಮ್ಮನವರನ್ನು ಹಿಂದುಗಡೆ ಕುಳಿಸಿಕೊಂಡು ಬರುತ್ತಿರುವಾಗ ಮೃತ ಯಶೋದಮ್ಮನವರ ಸೀರೆ ಹಿಂದಿನ ಗಾಲಿಗೆ ಸಿಲುಕಿ ಕೆಳಮುಖವಾಗಿ ಬಿದ್ದು ಅವರಿಗೆ ತೀವ್ರ ಪೆಟ್ಟಾಗಿ ಸ್ಥಳದಲ್ಲಿ ಮೃತ ಪಟ್ಟಿರುತ್ತಾರೆ ಎಂದು ಕೂಡಲೇ ಸ್ಥಳಕ್ಕೆ ಬರಬೇಕೆಂದು ತಿಳಿಸಿದ ಮೇರೆಗೆ ನಾನು ಸ್ಥಳಕ್ಕೆ ಹೋಗಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿ ಬೈಕನ್ನು ಅತಿವೇಗ ಮತ್ತು ಅಜಾರುಕತೆಯಿಂದ ಚಾಲನೆ ಮಾಡುತ್ತಿದ್ದರಿಂದಾಗಿ ಆತನ ತಪ್ಪಿನಿಂದ ಅಪಘಾತ ಸಂಬವಿಸಿರುತ್ತದೆ ಎಂದರೆ ಸಾಕ್ಷಿಯು ಆಗಿರಬಹುದು ಎಂದು ನುಡಿಯುತ್ತಾರೆ. ನಾನು ಸ್ಥಳಕ್ಕೆ ಹೋಗಿ ನೋಡಿದಾಗ ಸ್ಥಳದಲ್ಲಿ ನನ್ನ ಹೆಂಡತಿ ಮೃತ ಪಟ್ಟಿದ್ದಳು ಎಂದರೆ ಸರಿ. ನಾನು ದೂರು ನೀಡಿದ ನಂತರ ಪೊಲೀಸರು ನನ್ನ ಚಾಸಾ.2 ಮತ್ತು 3 ರವರ ಸಮಕ್ಷಮ ಕೃತ್ಯ ನಡೆದ ಸ್ಥಳ ಪಂಚನಾಮೆ ಜರುಗಿಸಿರುತ್ತಾರೆ ಎಂದರೆ ಸರಿ. ಸದರಿ ಕಾಲಕ್ಕೆ ನಿಪಿ. 4 ಮತ್ತು 5 ರಂತೆ ಛಾಯ ಚಿತ್ರ ತೆಗೆದು ಸಂಜೆ 4.15 ರಿಂದ 5.00 ಗಂಟೆವರೆಗೆ ಪಂಚನಾಮೆ ಜರುಗಿಸಿರುತ್ತಾರೆ ಎಂದರೆ ಸರಿ. ಪ್ರಕರಣದ ಬಗ್ಗೆ ನನಗೆ ಮಾಹಿತಿ ಇದ್ದರೂ ಸಹ ಆರೋಪಿಗೆ ಶಿಕ್ಷೆ ಆಗಬಾರದು ಎಂದು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಪಿ ಎಸ್ ಜೆ ವಕೀಲರಿಂದಃ**

ಅಪಘಾತಕ್ಕೊಳಗಾದ ಬೈಕ್ ನಂಬರ್ ನನಗೆ ಗೊತ್ತಿಲ್ಲ. ನಿಪಿ.1 ರಲ್ಲಿ ಬರೆದಿರುವ ಸಂಗತಿಗಳು ನನಗೆ ಗೊತ್ತಿಲ್ಲ ಎಂದರೆ ಸರಿ. ಅಪಘಾತವನ್ನು ನಾನು ಕಣ್ಣಾರೆ ನೋಡಿಲ್ಲ ಎಂದರೆ ಸರಿ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿಲ್ಲ, ಕಚ್ಚಾ ನಕಾಶೆ ತೆಗೆದಿಲ್ಲ ಎಂದರೆ ಸರಿಯಲ್ಲ. ಅಪಘಾತ ಆರೋಪಿ ತಪ್ಪಿನಿಂದ ಸಂಬವಿಸಿಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ

ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ